ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಪೋಡಿ ಮಾಡುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

207 (370) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ವೆ ನಂ. 16/ಪಿ9, ಕಣ್ಣೂರು, ಬಿದರಹಳ್ಳಿ ಹೋಬಳಿ, ಕೆ.ಆರ್.ಪುರಂ ತಾಲ್ಲೂಕು, ಬೆಂಗಳೂರು ಪೂರ್ವ ಈ ಜಮೀನನ್ನು ಪೋಡಿ ಮಾಡಲು ಕೋರಿ ಜಮೀನಿನ ಮಾಲೀಕರು 2012 ರಲ್ಲಿ ಅರ್ಜಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸರ್ಕಾರ ಪೋಡಿ ದುರಸ್ಥಿ ಮಾಡಲು ಕೈಗೊಂಡ ಕ್ರಮಗಳೇನು; (ಸಂಪೂರ್ಣ ದಾಖಲೆಗಳೊಂದಿಗೆ ಮಾಹಿತಿ ನೀಡುವುದು)

(ಇ) ಮಾನ್ಯ ಉಚ್ಚನ್ಯಾಯಾಲಯವು (WP 26191/2013) 10 ಜುಲೈ 2013 ರಂದು ಸದರಿ ಜಮೀನಿನ ಪೋಡಿ ಮಾಡಲು ಆದೇಶ ಮಾಡಿದ್ದು ಈವರೆವಿಗೂ ಪೋಡಿ ಮಾಡದೇ ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಉಲ್ಲಂಘನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು; (ಈವರೆವಿಗೂ ನಡೆದಿರುವ ಪತ್ರ ವಿನಿಮಯ ಮತ್ತು ಇಲಾಖೆಯ ಆದೇಶದ ಸಂಪೂರ್ಣ ಮಾಹಿತಿ ನೀಡುವುದು)

(ಉ) ಪೋಡಿ ಮಾಡಿದ್ದಲ್ಲಿ, ಸಂಪೂರ್ಣ ಮಾಹಿತಿಯನ್ನು ದಾಖಲೆಗಳೊಂದಿಗೆ ನೀಡುವುದು?